## ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಛಲವಾದಿ ಟಿ ನಾರಾಯಣಸ್ವಾಮಿ ನಿಯಮ 330 ರಡಿ ಗಮನ ಸೆಳೆಯುವ ಸೂಚನೆ:

### ಸೂಚನೆ

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣಕ್ಕಾಗಿ 2023-24ನೇ ಸಾಲಿನಲ್ಲಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಮೀಸಲಿಟ್ಟ ಅನುದಾನವನ್ನು ರಾಜ್ಯ ಸರ್ಕಾರವು ವಿವಿಧ ಯೋಜನೆಗಳ ಅನುಷ್ಠಾನಕ್ಕಾಗಿ ಬಳಕೆ ಮಾಡಿಕೊಳ್ಳಲು ಉದ್ದೇಶಿಸಿರುವುದರಿಂದ ದಲಿತರಿಗೆ ಅನ್ಯಾಯ ಮಾಡಿದಂತಾಗುತ್ತದೆ. ಪರಿಶಿಷ್ಟರ ಕಲ್ಯಾಣಕ್ಕಾಗಿ ಮೀಸಲಿಟ್ಟ ಹಣವನ್ನು ಅನ್ಯ ಉದ್ದೇಶಕ್ಕಾಗಿ ಬಳಸುವುದು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯನ್ನು ದುರ್ಬಳಕೆ ಮಾಡಿದಂತಾಗಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆಯ ಉಲ್ಲಂಘನೆಯಾಗಿರುತ್ತದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಶ್ರೇಯೋಭಿವೃದ್ಧಿಗೆ ಬಳಕೆ ಮಾಡಬೇಕಾದ ಅನುದಾನಕ್ಕೆ ಕೊಕ್ಕೆ ಹಾಕಿ ಸರ್ಕಾರದ ವಿವಿಧ ಯೋಜನೆಗಳಿಗೆ ಅನುದಾನವನ್ನು ಬಳಕೆ ಮಾಡುವುದರಿಂದ ತಳಸಮುದಾಯಗಳ ಅಭಿವೃದ್ಧಿ ಹಿನ್ನಡೆಯಾಗುತ್ತದೆ. 7ಡಿ ಕಾಯ್ದೆಯನ್ನು ತೆಗೆದು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಮೀಸಲಿಟ್ಟ ಅನುದಾನವನ್ನು ಯಾವುದಕ್ಕೂ ವರ್ಗಾವಣೆ ಮಾಡುವುದಿಲ್ಲ ಎಂದು ಆಶ್ವಾಸನೆ ನೀಡಿದ ಸರ್ಕಾರ 11 ಸಾವಿರ ಕೋಟಿಗಳಿಗೂ ಅಧಿಕ ಮೊತ್ತವನ್ನು ವಿವಿಧ ಯೋಜನೆಗಳ ಅನುಷ್ಠಾನಕ್ಕೆ ವರ್ಗಾವಣೆ ಮಾಡಿರುವುದರಿಂದ ದಲಿತರ ಶ್ರೇಯೋಭಿವೃದ್ಧಿಗೆ ಹಿನ್ನಡೆಯಾಗುತ್ತದೆ. ಅನ್ಯ ಉದ್ದೇಶಕ್ಕೆ ಮತ್ತು ವಿವಿಧ ಯೋಜನೆಗಳ ಅನುಷ್ಠಾನಕ್ಕೆ ಬಳಕೆ ಮಾಡಿರುವ ಹಣವನ್ನು ಮತ್ತೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಲ್ಲಿ ವಿನಿಯೋಗ ಮಾಡಲು ಸರ್ಕಾರ ಕ್ರಮ ತೆಗೆದುಕೊಳ್ಳುವಂತೆ ಮತ್ತು ತಳಸಮುದಾಯಗಳಿಗೆ ಅನ್ಯಾಯವಾಗದಂತೆ ಸರ್ಕಾರವು ಸೂಕ್ತ ಕ್ರಮವಹಿಸುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಸಚಿವರಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

### ಉತ್ತರ.

ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅಧಿನಿಯಮ 2013 ಮತ್ತು ನಿಯಮಗಳು 2017ರಲ್ಲಿ ಪ.ಜಾತಿ/ ಪ.ಪಂಗಡದ ಜನರಿಗೆ ನೇರವಾಗಿ ಪ್ರಯೋಜನವಾಗುವ ಕಾರ್ಯಕ್ರಮಗಳಿಗೆ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅನುದಾನವನ್ನು ಹಂಚಿಕೆ ಮಾಡಿ ಅನುಷ್ಠಾನಗೊಳಿಸಲು ಅವಕಾಶವಿದೆ.

ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅನುದಾನವನ್ನು ಪ.ಜಾತಿ/ ಪ.ಪಂಗಡದವರ ಅಭಿವೃದ್ಧಿಗೆ ವಿನಿಯೋಗಿಸುತ್ತಿರುವ ಕಾರಣ ಅನ್ಯ ಉದ್ದೇಶಕ್ಕಾಗಿ ಅನುದಾನ ಬಳಸಿರುವುದಿಲ್ಲ. ಆದ್ದರಿಂದ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಕಾಯ್ದೆಯ ಉಲ್ಲಂಘನೆಯ ಪ್ರಶ್ನೆ ಉದ್ಭವಿಸುವುದಿಲ್ಲ.

ಗ್ಯಾರಂಟಿ ಯೋಜನೆಗಳಡಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿ ಒದಗಿಸಿರುವ ಅನುದಾನವನ್ನು ಪ.ಜಾತಿ/ ಪ.ಪಂಗಡದವರಿಗೆ ಉಪಯೋಗಿಸುತ್ತಿರುವ ಕಾರಣ ಇದರಿಂದ ಯಾವುದೇ ಅನ್ಯಾಯವಾಗುವುದಿಲ್ಲ.

ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರ ಹಿತದೃಷ್ಟಿಯಿಂದ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆ 2013ರ ಸೆಕ್ಷನ್ 7(ಡಿ) ಯನ್ನು ಕೈಬಿಡಲು ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಘೋಷಿಸಲಾಗಿದೆ. ಇದರ ಪರಿಣಾಮವಾಗಿ ಭಾರೀ ನೀರಾವರಿ, ಲೋಕೋಪಯೋಗಿ, ನಗರಾಭಿವೃದ್ಧಿ, ಸಣ್ಣ ನೀರಾವರಿ ಇತ್ಯಾದಿ ಇಲಾಖೆಗಳಿಗೆ ಕಾಮಗಾರಿಗಳಿಗಾಗಿ ಹಂಚಿಕೆ ಮಾಡುತ್ತಿದ್ದ ಅನುದಾನವನ್ನು ಕಡಿತಗೊಳಿಸಿ, ಫಲಾನುಭವಿ ಆಧಾರಿತ ಕಾರ್ಯಕ್ರಮಗಳಿಗೆ ಹೆಚ್ಚಿನ ಅನುದಾನವನ್ನು ಹಂಚಿಕೆ ಮಾಡಲಾಗಿದೆ.

ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಕಾಯ್ದೆಯ ಸೆಕ್ಷನ್ 7 (ಡಿ) ಅನ್ನು ಆಶ್ವಾಸನೆಯಂತೆ ಕೈಬಿಡಲು ತಿದ್ದುಪಡಿ ತರುವ ಬಗ್ಗೆ ಕ್ರಮ ವಹಿಸಲಾಗುತ್ತಿದೆ.

**ಸಕಇ 483 ಎಸ್‌ಎಲ್ ಪಿ 2023**

**(ಡಾ ಹೆಚ್.ಸಿ ಮಹದೇವಪ್ಪ)**
ಸಮಾಜ ಕಲ್ಯಾಣ ಸಚಿವರು